| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅದಿಕಾರಿಯವರು ಮಾತನಾಡುತ್ತಾ, ಪೈಕಾ ಯೋಜನೆಯಡಿಯಲ್ಲಿ ಅನುಷ್ಠಾನ ಮಾಡುವ ಶಾಲಾ ಮೈದಾನಗಳ ಕಾಮಗಾರಿಗಳ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಅನುಷ್ಠಾನ ಮಾಡಬೇಕೆಂದು ಉಪ ನಿರ್ದೇಶಕರು, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆರವರಿಗೆ ತಿಳಿಸಿದರು. | |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಬಿಳೀಚೌಡಯ್ಯ)
ಅಧ್ಯಕ್ಷರು
ಸಾಮಾನ್ಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ.

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆರ್.ಐ.ಡಿ.ಎಫ್ 7 ರಲ್ಲಿ ನಿರ್ಮಿತಿ ಕೇಂದ್ರದ ವತಿಯಿಂದ ಅಂಗನವಾಡಿ ಕೇಂದ್ರಗಳ ಕಟ್ಟಡ ಕಾಮಗಾರಿಯನ್ನು ಅನುಷ್ಠಾನ ಮಾಡಿರುತ್ತಾರೆ ಮತ್ತು 2006-07ನೇ ಸಾಲಿನ ಆರ್.ಐ.ಡಿ.ಎಫ್ ಅಡಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಅನುಷ್ಠಾನ ಮಾಡಲಾಗಿದ್ದು, ಕಾಮಗಾರಿಗಳು ಪೂರ್ಣಗೊಂಡಿರುವುದಿಲ್ಲ. ಇಂತಹ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರದಿಂದ ರೂ.30.00ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಸಂಬಂಧಪಟ್ಟ ಏಜನ್ಸಿಯವರಿಗೆ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಮಾತನಾಡುತ್ತಾ, ಮೇಲೆ ಹೇಳಿದ ಅಂಗನವಾಡಿ ಕೇಂದ್ರದ ಕಾಮಗಾರಿಗಳು ಯಾವ ಹಂತದಲ್ಲಿವೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಅನುಷ್ಠಾನ ಮಾಡಲಾಗಿರುವ ಅಂಗನವಾಡಿ ಕಟ್ಟಡ ಕಾಮಗಾರಿಗಳು ಯಾವ ಹಂತದಲ್ಲಿವೆ ಮತ್ತು ಅವುಗಳನ್ನು ಪೂರ್ಣಗೊಳಿಸಲು ಎಷ್ಟು ಅನುದಾನದ ಅವಶ್ಯಕತೆಯಿದೆ ಎಂಬ ಬಗ್ಗೆ ನಿರ್ಮಿತಿ ಕೇಂದ್ರ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಮಾಹಿತಿಯನ್ನು ಪಡೆದು ಅದರನ್ವಯ ಅಪೂರ್ಣಗೊಂಡಿರುವ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಬೇಕಾಗಿರುತ್ತದೆ ಎಂದು ವಿವರ ನೀಡಿದರು.<br>**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತ**, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯ ವತಿಯಿಂದ ಆರ್.ಐ.ಡಿ.ಎಫ್/ ಎಸ್.ಡಿ.ಪಿ ಯೋಜನೆಯಡಿ ಅಂಗನವಾಡಿ ಕಟ್ಟಡ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕಾಗಿದ್ದು, ಘಟಕವೆಚ್ಚ ಕಡಿಮೆಯಿದೆಯೆಂದು ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲವೆಂದು ತಿಳಿಸಿದರು. ಈ ಬಗ್ಗೆ ಹಿಂದಿನ ಸಭೆಗಳಲ್ಲಿ ಚರ್ಚಿಸಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದವರು ತಯಾರಿಸಿರುವ ರೂ.4.10ಲಕ್ಷಗಳ ಘಟಕ ವೆಚ್ಚಕ್ಕೆ ಸರಿದೂಗುವಂತೆ ತಲಾ ರೂ.38000/-ದಂತೆ ಜಿಲ್ಲಾ ಪಂಚಾಯಿತಿ ಸದಸ್ಯರು ತಮ್ಮ ಕ್ಷೇತ್ರದಲ್ಲಿ ಬರುವ ಅಂಗನವಾಡಿ ಕೇಂದ್ರಗಳಿಗೆ ನೀಡಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ತೀರ್ಮಾನಿಸಲಾಗಿತ್ತು. ಆದರೆ, ಇಲ್ಲಿಯವರೆಗೆ ಯಾವುದೇ ಕ್ರಮ ವಹಿಸಿರುವುದಿಲ್ಲ.<br>ಉಪ ನಿರ್ದೇಶಕರು, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆರವರು ಮಾತನಾಡುತ್ತಾ, ನಬಾರ್ಡ್‌ನಿಂದ ನಿಗದಿಪಡಿಸಿರುವ ಘಟಕ ವೆಚ್ಚವು ಕಡಿಮೆಯಿದ್ದು, ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸಾಧ್ಯವಿಲ್ಲ. ಈ ಬಗ್ಗೆ ಜಿಲ್ಲಾ ಪಂಚಾಯಿತಿಗೆ ಈ ಮೊದಲೇ ಪತ್ರವ್ಯವಹಾರವನ್ನು ಮಾಡಿರುವುದಾಗಿ ಸಭೆಗೆ ವಿವರ ನೀಡಿದರು.<br>ಆರ್.ಐ.ಡಿ.ಎಫ್/ ಎಸ್.ಡಿ.ಪಿ ಯೋಜನೆಗಳಡಿಯ ಅಂಗನವಾಡಿ ಕಟ್ಟಡಗಳ ಅನುದಾನವನ್ನು ಸಂಬಂಧಿಸಿದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ವರ್ಗಾಯಿಸಿ ಅನುಷ್ಠಾನಗೊಳಿಸುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಮಾತನಾಡುತ್ತಾ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಪೈಕಾ ಯೋಜನೆಯಲ್ಲಿ ಅನುಷ್ಠಾನ ಮಾಡುತ್ತಿರುವ ಶಾಲಾ ಆಟದ ಮೈದಾನ ಕಾಮಗಾರಿಯನ್ನು ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು. | ಆರ್.ಐ.ಡಿ.ಎಫ್/ ಎಸ್.ಡಿ.ಪಿ ಯೋಜನೆಗಳಡಿಯ ಅಂಗನವಾಡಿ ಕಟ್ಟಡಗಳ ಅನುದಾನವನ್ನು ಸಂಬಂಧಿಸಿದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ವರ್ಗಾಯಿಸಿ ಅನುಷ್ಠಾನಗೊಳಿಸುವಂತೆ ಸಭೆ ಯಲ್ಲಿ ತೀರ್ಮಾನಿಸಲಾಯಿತು. |

| | | | |
|---|---|---|---|
| | ಅನುಮೋದನೆ ನೀಡುವ ಬಗ್ಗೆ. | ರೂ.14.00ಲಕ್ಷಗಳನ್ನು 2012-13ನೇ ಸಾಲಿನಲ್ಲಿ ನಿಗದಿಯಾಗಿರುವ ಅನುದಾನದಲ್ಲಿ ಪಾವತಿಸಬೇಕಾಗಿದ್ದು, ಇದಕ್ಕೆ ಸಮಿತಿಯು ಅನುಮೋದನೆ ನೀಡಬೇಕೆಂದು ಕೋರಿದರು.<br>ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಸ್ವಂತ ಕಟ್ಟಡವಿರುವುದಿಲ್ಲ. ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಅನುದಾನವನ್ನು ನೀಡಿದಲ್ಲಿ ದೇವರಾಜು ಅರಸು ಭವನದಲ್ಲಿ ಜಾಗವಿದ್ದು, ಅಲ್ಲಿ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಅನುಕೂಲವಾಗುತ್ತದೆ. ಆದ್ದರಿಂದ, ಜಿಲ್ಲಾ ಪಂಚಾಯಿತಿಯಿಂದ ಅನುದಾನವನ್ನು ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಛೇರಿ ಕಟ್ಟಡಗಳ ನಿರ್ಮಾಣ ಲೆಕ್ಕಶೀರ್ಷಿಕೆ 2515-00-101-0-29ರಡಿ ಲಭ್ಯವಿರುವ ಅನುದಾನದಲ್ಲಿ 2012-13ನೇ ಸಾಲಿಗೆ ರೂ.6.00ಲಕ್ಷಗಳನ್ನು ಬಿಡುಗಡೆ ಮಾಡಲು ಮತ್ತು ಮಾನ್ಯ ಉಪಾಧ್ಯಕ್ಷರ ಕೊಠಡಿ ನವೀಕರಣ ಮತ್ತು ಜಿಲ್ಲಾ ಪಂಚಾಯಿತಿ ಕಟ್ಟಡಕ್ಕೆ ಸುಣ್ಣಬಣ್ಣ ಹೊಡೆಯಲು ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಸಮಿತಿಯ ಅನುಮೋದನೆಯನ್ನು ನೀಡುವಂತೆ ಕೋರಿದರು. | ಯು.ಜಿ.ಡಿಗೆ ಸಂಪರ್ಕ, ಉಪ ಕಾರ್ಯದರ್ಶಿ (ಆಡಳಿತ), ಉಪ ಕಾರ್ಯದರ್ಶಿ ( ಅಭಿವೃದ್ಧಿ) ಹಾಗೂ ಯೋಜನಾ ನಿರ್ದೇಶಕರ ಕೊಠಡಿಗಳಿಗೆ ಸುಣ್ಣಬಣ್ಣ ಕಾಮಗಾರಿಗಳಿಗೆ ಅನುದಾನವನ್ನು ಉಪಯೋಗಿಸಿಕೊಳ್ಳಲು ಸಭೆಯಲ್ಲಿ ನಿರ್ಣಯಿಸ ಲಾಯಿತು.<br>ಮುಂದುವರೆದು, ಮಾನ್ಯ ಉಪಾಧ್ಯಕ್ಷರ ಕೊಠಡಿ ನವೀಕರಣ ಮತ್ತು ಜಿಲ್ಲಾ ಪಂಚಾಯಿತಿ ಕಟ್ಟಡಕ್ಕೆ ಸುಣ್ಣ ಬಣ್ಣ ಹೊಡೆಯಲು ಅವಶ್ಯವಿರುವ ಅನುದಾನವನ್ನು ಜಿಲ್ಲಾ ಪಂಚಾಯಿತಿ ಕಛೇರಿ ಕಟ್ಟಡಗಳ ನಿರ್ಮಾಣ ಲೆಕ್ಕಶೀರ್ಷಿಕೆ 2515-00-101-0-29ರಡಿ ನಿಗಧಿಯಾಗಿರುವ ರೂ.50.00ಲಕ್ಷ ಗಳಲ್ಲಿ ಭರಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು. |
| 3 | ಬೇಲೂರಿನಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಬಾಡಿಗೆ ಕಟ್ಟಡಕ್ಕೆ ಬಾಡಿಗೆಯನ್ನು ನಿಗದಿಪಡಿಸುವ ಬಗ್ಗೆ | ದಿನಾಂಕ: 26-03-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯಲ್ಲಿ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಬೇಲೂರು ಪಟ್ಟಣದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ತರಗತಿಯನ್ನು ನಡೆಸಲು ಶ್ರೀ ರಾಜಶೇಖರ್ ಮತ್ತು ಇತರರು ಇವರಿಗೆ ಸೇರಿದ ಕಟ್ಟಡವನ್ನು ದಿನಾಂಕ: 23-08-2011ರಿಂದ ಬಾಡಿಗೆ ಆಧಾರದ ಮೇಲೆ ಪಡೆಯಲಾಗಿದ್ದು, ಸದರಿ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆ, ಹಾಸನ ಇವರು ಮಾಹೆಯಾನ ಬಾಡಿಗೆ ರೂ.47000/-ಗಳನ್ನು ನಮೂನೆ-10ರಲ್ಲಿ ಶಿಫಾರಸ್ಸು ಮಾಡಿದ್ದು, ಕಟ್ಟಡದ ಮಾಲೀಕರಿಗೆ ದಿನಾಂಕ: 23-08-2011ರಿಂದ ಬಾಡಿಗೆ ಪಾವತಿಸಬೇಕಾಗಿರುವುದರಿಂದ ಬಾಡಿಗೆಯನ್ನು ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುಬೇಕೆಂದು ಕೋರಿದ್ದು, ಸಮಿತಿ ಸದಸ್ಯರಿಂದ ಸ್ಥಳ ತನಿಖೆ ನಡೆಸಿ ಬಾಡಿಗೆಯನ್ನು ನಿಗದಿಪಡಿಸಲು ತೀರ್ಮಾನಿಸಲಾಗಿತ್ತು.<br>ಅದರಂತೆ, ಮಾನ್ಯ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳು ಸ್ಥಳ ತನಿಖೆ ನಡೆಸಿ ಶ್ರೀ ರಾಜಶೇಖರ್ ಮತ್ತು ಇತರರು ಇವರ ಒಡೆತನಕ್ಕೆ ಸೇರಿದ ಕಟ್ಟಡಕ್ಕೆ ಮಾಹೆಯಾನ ರೂ.40000/-(ರೂಪಾಯಿ ನಲವತ್ತು ಸಾವಿರ ಮಾತ್ರ)ಗಳಂತೆ ಬಾಡಿಗೆಯನ್ನು ಪಾವತಿಸಲು ಒಪ್ಪಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಬೇಲೂರಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ನಡೆಸಲು ಪಡೆದಿರುವ ಶ್ರೀ ರಾಜಶೇಖರ್ ಮತ್ತು ಇತರರು ಇವರಿಗೆ ಸೇರಿದ ಕಟ್ಟಡಕ್ಕೆ ಮಾಹೆಯಾನ ರೂ.40000/-(ರೂಪಾಯಿ ನಲವತ್ತು ಸಾವಿರ ಮಾತ್ರ)ಗಳಂತೆ ಬಾಡಿಗೆಯನ್ನು ನಿಗದಿಪಡಿಸಲು ಮತ್ತು ದಿನಾಂಕ: 23-08-2011ರಿಂದ ಮಾಲೀಕರಿಗೆ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |

| | | | |
|---|---|---|---|
| | | 12 ಅಡಿ ಜಾಗವನ್ನು ರಸ್ತೆಗೆ ನೀಡಲು ಶ್ರೀ ಹೆಚ್.ಕೆ ಕುಮಾರಸ್ವಾಮಿ, ಮಾನ್ಯ ಶಾಸಕರು, ಸಕಲೇಶಪುರ-ಆಲೂರು ಕ್ಷೇತ್ರ ಇವರು ಕೋರಿರುತ್ತಾರೆ. ಅಲ್ಲದೆ, ಆಲೂರು ಟೌನ್‌ಗೆ 2012-13ನೇ ಸಾಲಿಗೆ ಹೊಸದಾಗಿ ಎರಡು ಮೆಟ್ರಿಕ್ ನಂತರದ ಬಾಲಕ/ ಬಾಲಕಿಯರ ವಿದ್ಯಾರ್ಥಿನಿಲಯಗಳು ಮಂಜೂರಾಗಿದ್ದು, ಸದರಿ ವಿದ್ಯಾರ್ಥಿನಿಲಯದ ಜಾಗದಲ್ಲಿ ಮೆ.ನಂತರದ ಕಾಲೇಜು ಬಾಲಕರ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಬೇಕಾಗಿರುವುದರಿಂದ, ರಸ್ತೆಗೆ ಜಾಗವನ್ನು ನೀಡಲು ಅನುಮೋದನೆಯನ್ನು ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ (ಉರುಫ್ ಪಾಪಣ್ಣಿ)ರವರು ಮಾತನಾಡುತ್ತಾ, ಇಲಾಖೆಯ ಜಾಗವನ್ನು ರಸ್ತೆಗಾಗಿ ಬಿಟ್ಟುಕೊಡಲು ಕಾನೂನು ರೀತಿ ಅವಕಾಶವಿದೆಯೇ? ಎಂಬುದನ್ನು ಪರಿಶೀಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಮತ್ತು ಕಾಲೇಜಿನ ಅಂತ್ಯಕ್ಕೆ ರಸ್ತೆಯು ಮುಕ್ತಾಯವಾಗುತ್ತದೆ. ಮುಂದಕ್ಕೆ ಹೋಗಲು ದಾರಿಯಿರುವುದಿಲ್ಲ. ಆದ್ದರಿಂದ, ಯಾವುದೇ ಸಮಸ್ಯೆಗಳು ಉದ್ಭವಿಸುವುದಿಲ್ಲವೆಂದು ವಿವರ ನೀಡಿದರು. | ಮತ್ತು ಕಾಲೇಜಿಗೆ ಬರುವ ವಿದ್ಯಾರ್ಥಿಗಳಿಗೆ ಹೋಗಿಬರಲು ಅನುಕೂಲವಾಗುವಂತೆ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| **13. ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | | |
| 1 | ಚನ್ನರಾಯಪಟ್ಟಣ ಟೌನ್‌ನಲ್ಲಿ ನಡೆಯುತ್ತಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಕಟ್ಟಡಕ್ಕೆ ಬಾಡಿಗೆ ನಿಗದಿಪಡಿಸುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಸಕಅ/ಡಿ-5/ಸಿ.ಆರ್/19/2010-11 ದಿನಾಂಕ: 21-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಚನ್ನರಾಯಪಟ್ಟಣ ಟೌನ್‌ನಲ್ಲಿ ನಡೆಯುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯನ್ನು ದಿನಾಂಕ: 16-01-2012ರಿಂದ ಶ್ರೀ ಚಂದ್ರೇಗೌಡ ಬಿನ್ ಲೇಟ್ ಪುಟ್ಟಸ್ವಾಮಿಗೌಡ ಇವರಿಗೆ ಸೇರಿದ ಕಟ್ಟಡದಲ್ಲಿ ನಡೆಸಲಾಗುತ್ತಿದ್ದು, ಈ ಕಟ್ಟಡದಲ್ಲಿ 4 ಶಾಲಾ ಕೊಠಡಿಗಳು, 5 ಸಿಬ್ಬಂದಿ ಕೊಠಡಿಗಳು, 7 ಶೌಚಾಲಯ ಕೊಠಡಿಗಳು ಇದ್ದು, ತರಗತಿಗೆ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯವನ್ನು ಹೊಂದಿರುತ್ತದೆ. ಈ ಕಟ್ಟಡಕ್ಕೆ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ವಿಭಾಗ, ಹಾಸನ ಇವರು ಮಾಹೆಯಾನ ರೂ.27000/-ದಂತೆ ಬಾಡಿಗೆಯನ್ನು ನಿಗದಿಪಡಿಸಿರುತ್ತಾರೆ. ಅದರಂತೆ ದಿನಾಂಕ: 16-01-2012ರಿಂದ ಮಾಲೀಕರಿಗೆ ಬಾಡಿಗೆಯನ್ನು ಪಾವತಿಸಬೇಕಾಗಿದ್ದು, ಅನುಮೋದನೆಯನ್ನು ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ಟೌನ್‌ನಲ್ಲಿ ಶ್ರೀ ಚಂದ್ರೇಗೌಡ ಬಿನ್ ಲೇಟ್ ಪುಟ್ಟಸ್ವಾಮಿಗೌಡ ಇವರಿಗೆ ಸೇರಿದ ಕಟ್ಟಡದಲ್ಲಿ ನಡೆಸಲಾಗುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗೆ ಮಾಹೆಯಾನ ರೂ.20000/-(ರೂಪಾಯಿ ಇಪ್ಪತ್ತು ಸಾವಿರ ಮಾತ್ರ)ಗಳಂತೆ ಬಾಡಿಗೆಯನ್ನು ನಿಗದಿಪಡಿಸಲು ಮತ್ತು ದಿನಾಂಕ: 16-01-2012ರಿಂದ ಮಾಲೀಕರಿಗೆ ಬಾಡಿಗೆಯನ್ನು ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 2 | ಜಿಲ್ಲಾ ಪಂಚಾಯಿತಿ ಕಛೇರಿ ಕಟ್ಟಡಗಳ ನಿರ್ಮಾಣ ಲೆಕ್ಕಶೀರ್ಷಿಕೆ 2515-00-101-0-29ರಡಿ ನಿಗದಿಯಾಗಿರುವ ಅನುದಾನವನ್ನು ವಿನಿಯೋಗಿಸಲು | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಛೇರಿ ಕಟ್ಟಡಗಳ ನಿರ್ಮಾಣ ಲೆಕ್ಕಶೀರ್ಷಿಕೆ 2515-00-101-0-29ರಡಿ ರೂ.50.00ಲಕ್ಷಗಳು ನಿಗದಿಯಾಗಿದ್ದು, ಸದರಿ ಅನುದಾನದಲ್ಲಿ ಹೇಮಾವತಿ ಸಭಾಂಗಣದ ನವೀಕರಣಕ್ಕಾಗಿ ಸಿದ್ಧಪಡಿಸಿದ ಒಟ್ಟು ರೂ.38.00ಲಕ್ಷಗಳಲ್ಲಿ ರೂ.24.00ಲಕ್ಷಗಳನ್ನು ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆರವರಿಗೆ ಪಾವತಿಸಲಾಗಿದ್ದು, ಉಳಿಕೆ ಬಾಬ್ತು | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯಿತಿ ಕಟ್ಟಡಕ್ಕೆ ಸಂಬಂಧಿಸಿದ ಶೌಚಾಲಯಕ್ಕೆ ಪೈಪ್‌ಲೈನ್ ಬದಲಾವಣೆ, |

| | | | |
|---|---|---|---|
| | ತಯಾರಿಸುವ ಬಗ್ಗೆ | ನಿರ್ಣಯಕ್ಕೆ ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿಯವರು ಮಂಡಿಸಿದರು. | ರೂ.115.78 ಲಕ್ಷ (ರೂಪಾಯಿ ನೂರ ಹದಿನೈದು ಲಕ್ಷದ ಎಪ್ಪತ್ತೆಂಟು ಸಾವಿರ ಮಾತ್ರ)ಗಳಲ್ಲಿ ಸರ್ಕಾರದ ಮಾರ್ಗಸೂಚಿಗಳನ್ವಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲು ಮತ್ತು ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮೂಲಕ ಅನುಷ್ಠಾನಗೊಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| 11 | ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣದಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಹೆಚ್ಚುವರಿ ಕಟ್ಟಡಕ್ಕೆ (ಹಾಸ್ಟೆಲ್) ಬಾಡಿಗೆ ಪರಿಷ್ಕರಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಸಕಅ/ಡಿ-5/ಸಿ.ಆರ್/19/2010-11 ದಿನಾಂಕ: 16-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಶ್ರೀ ಆರ್.ರಾಮಪ್ಪ ಬಿನ್ ರಾಮಪ್ಪ ಇವರಿಗೆ ಸೇರಿದ ಕಟ್ಟಡದಲ್ಲಿ ನಡೆಸಲಾಗುತ್ತಿದ್ದು, ಈ ಹಿಂದೆ ಈ ಶಾಲೆಗೆ 2010-11ನೇ ಸಾಲಿಗೆ ರೂ.6000/-ಗಳ ಬಾಡಿಗೆ ನಿಗದಿಯಾಗಿರುತ್ತದೆ. ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಕಡಿಮೆ ಇರುವುದರಿಂದ, ಹೆಚ್ಚುವರಿಯಾಗಿ ಒಂದು ವಸತಿ ಕೊಠಡಿ ಹಾಗೂ ಶೌಚಾಲಯದ ಕೊಠಡಿಯನ್ನು ನಿರ್ಮಿಸಿದ್ದು, ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ವಿಭಾಗ, ಹಾಸನ ಇವರು ಈ ಹಿಂದೆ 2011-12ನೇ ಸಾಲಿಗೆ ದಿನಾಂಕ: 01-04-2011ರಿಂದ ಮಾಹೆಯಾನ ಬಾಡಿಗೆಯನ್ನು ಪರಿಷ್ಕರಿಸಿ ರೂ.7400/-ರಂತೆ ಪರಿಷ್ಕರಿಸಿರುತ್ತಾರೆ. ಅದರಂತೆ, 01-04-2011ರಿಂದ ಮಾಹೆಯಾನ ಪರಿಷ್ಕೃತ ಬಾಡಿಗೆಯನ್ನು ನಿಗದಿಪಡಿಸಲು ಮತ್ತು ಮಾಲೀಕರಿಗೆ ಪಾವತಿಸಲು ಅನುಮೋದನೆಯನ್ನು ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿರುವಂತೆ ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣದಲ್ಲಿ ಶ್ರೀ ಆರ್.ರಾಮಪ್ಪ ಬಿನ್ ರಾಮಪ್ಪ ಇವರಿಗೆ ಸೇರಿದ ಕಟ್ಟಡದಲ್ಲಿ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಮಾಹೆಯಾನ ರೂ.7000/-ದಂತೆ (ರೂಪಾಯಿ ಏಳು ಸಾವಿರ ಮಾತ್ರ)ಗಳಂತೆ ನಿಗದಿಪಡಿಸಲು ಮತ್ತು ದಿನಾಂಕ: 01-04-2011ರಿಂದ ಮಾಲೀಕರಿಗೆ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 12 | ಆಲೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ ಜಾಗದಲ್ಲಿ ರಸ್ತೆಗಾಗಿ 12 ಅಡಿ ಜಾಗವನ್ನು ಬಿಟ್ಟುಕೊಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಸಕಅ/ಡಿ-5/ಸಿ.ಆರ್/19/2010-11 ದಿನಾಂಕ: 16-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಆಲೂರು ಟೌನ್‌ನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವಿದ್ದು, ಈ ವಿದ್ಯಾರ್ಥಿನಿಲಯದ ಹಿಂಭಾಗದಲ್ಲಿ ಪ್ರಥಮ ದರ್ಜೆ ಕಾಲೇಜು ನಡೆಯುತ್ತಿದ್ದು, ಈ ಕಾಲೇಜಿನಲ್ಲಿ 400 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಕಾಲೇಜಿಗೆ ಹೋಗಿಬರಲು ಮುಖ್ಯ ರಸ್ತೆ ಇರುವುದಿಲ್ಲ. ವಿದ್ಯಾರ್ಥಿಗಳು ಕಾಲೇಜಿಗೆ ಹೋಗಿ ಬರಲು 1/2 ಕಿ.ಮೀ ಸುತ್ತಿ ಬರುತ್ತಿದ್ದಾರೆ. ವಿದ್ಯಾರ್ಥಿನಿಲಯದ ಜಾಗದಲ್ಲಿ 12 ಅಡಿ ಜಾಗ ಬಿಡಿಸಿಕೊಟ್ಟರೆ ವಿದ್ಯಾರ್ಥಿಗಳು ಕಾಲೇಜಿನಿಂದ ಮುಖ್ಯ ರಸ್ತೆಗೆ ಹೋಗಿ ಬರಲು ತುಂಬಾ ಅನುಕೂಲವಾಗುತ್ತದೆ. ಆದ್ದರಿಂದ, ವಿದ್ಯಾರ್ಥಿನಿಲಯದ ಜಾಗದಲ್ಲಿ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿರುವಂತೆ ಆಲೂರುಟೌನ್‌ನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು |

| | | | |
|---|---|---|---|
| | ಕ್ಯಾಲೆಂಡರ್‌ಗಳನ್ನು ಮುದ್ರಿಸುವ ಬಗ್ಗೆ. | ಬರುವ ವಿವಿಧ ಇಲಾಖೆಗಳ ದೂರವಾಣಿ ಸಂಖ್ಯೆಗಳನ್ನೊಳಗೊಂಡಂತೆ 2013ನೇ ಇಸವಿಯ ಡೈರಿ/ ಕ್ಯಾಲೆಂಡರ್/ ಪ್ಯಾಕೆಟ್ ಕ್ಯಾಲೆಂಡರ್‌ಗಳನ್ನು ಮುದ್ರಿಸಿ ಮಾನ್ಯ ಶಾಸಕರು/ ಜಿಲ್ಲಾ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯರುಗಳು ಮತ್ತು ಜಿಲ್ಲಾ ಮಟ್ಟದ/ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ವಿತರಿಸಬೇಕಾಗಿದ್ದು, ಈ ಸಂಬಂಧ ತಗಲುವ ವೆಚ್ಚವನ್ನು ಜಿಲ್ಲಾ ಪಂಚಾಯಿತಿ ನಿರ್ವಹಣಾ ವೆಚ್ಚ ಲೆಕ್ಕಶೀರ್ಷಿಕೆ 2515 ರಡಿಯಲ್ಲಿ ಭರಿಸಲಾಗುವುದು ಎಂದು ವಿವರಿಸುತ್ತಾ, ಸಮಿತಿಯು ಅನುಮೋದನೆಯನ್ನು ನೀಡಬೇಕೆಂದು ಕೋರಿದರು. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರಸ್ತಾಪಿಸಿದಂತೆ, 2013ನೇ ಇಸವಿಯ ಡೈರಿ ಮತ್ತು ಪ್ಯಾಕೆಟ್ ಕ್ಯಾಲೆಂಡರ್‌ಗಳನ್ನು ಮುದ್ರಿಸಲು ಮತ್ತು ಈ ಸಂಬಂಧ ತಗಲುವ ವೆಚ್ಚವನ್ನು ಜಿಲ್ಲಾ ಪಂಚಾಯಿತಿ ನಿರ್ವಹಣಾ ವೆಚ್ಚ ಲೆಕ್ಕಶೀರ್ಷಿಕೆ 2515 ರಡಿಯಲ್ಲಿ ಭರಿಸಲು ಅನುಮೋದನೆಯನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 9 | ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಹಾಸನ ಟೌನ್ (ಸಂಖ್ಯಾಬಲ ಹೆಚ್ಚಳ) ಈ ನಿಲಯದ ಖಾಸಗಿ ಕಟ್ಟಡಕ್ಕೆ ಬಾಡಿಗೆ ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಆ (8) 1680 ZPH -09 ಬಾಡಿಗೆ 2012 ದಿನಾಂಕ: 16-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಟೌನ್‌ನಲ್ಲಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಸಂಖ್ಯಾಬಲವನ್ನು (ಸಂಖ್ಯಾಬಲ ಹೆಚ್ಚಳ) 130 ರಿಂದ 300ಕ್ಕೆ ಹೆಚ್ಚಿಸಲಾಗಿದ್ದು, ಸಂಖ್ಯಾಬಲಕ್ಕನುಗುಣವಾಗಿ ವಿದ್ಯಾರ್ಥಿನಿಲಯವನ್ನು ನಡೆಸಲು ಶ್ರೀ ಕೆ.ಎಂ.ದಿನೇಶ್ ಬಿನ್ ಮಂಜೇಗೌಡ, ಆಡುವಳ್ಳಿ ಹಿರಿಯ ಪ್ರಾಥಮಿಕ ಶಾಲೆ ಹಿಂಬಾಗ, , ಉದಯಗಿರಿ ಹಾಸನ ಇವರ ಒಡೆತನದಲ್ಲಿರುವ ಕಟ್ಟಡವನ್ನು ದಿನಾಂಕ: 19-07-2012ರಿಂದ ಬಾಡಿಗೆಯನ್ನು ಪಡೆಯಲಾಗಿದ್ದು, ಸದರಿ ಕಟ್ಟಡವು 7672 ಚ.ಅಡಿ ವಿಸ್ತೀರ್ಣವಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುತ್ತದೆ. ಈ ಕಟ್ಟಡಕ್ಕೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಹಾಸನರವರು ಮಾಹೆಯಾನ ರೂ.64000/-ಗಳನ್ನು ನಿಗದಿಪಡಿಸಿ ನಮೂನೆ -10ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಕಟ್ಟಡದ ಮಾಲೀಕರಿಗೆ 19-07-2012ರಿಂದ ಬಾಡಿಗೆಯನ್ನು ಪಾವತಿಸಬೇಕಾಗಿರುವುದರಿಂದ, ಕಟ್ಟಡಕ್ಕೆ ಬಾಡಿಗೆಯನ್ನು ನಿಗಧಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡಬೇಕೆಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿರುವಂತೆ ಶ್ರೀ ಕೆ.ಎಂ.ದಿನೇಶ್ ಬಿನ್ ಮಂಜೇಗೌಡ, ಆಡುವಳ್ಳಿ ಹಿರಿಯ ಪ್ರಾಥಮಿಕ ಶಾಲೆ, ಹಿಂಬಾಗ, ಉದಯಗಿರಿ ಹಾಸನ ಇವರ ಒಡೆತನದ ಕಟ್ಟಡದಲ್ಲಿ ನಡೆಯುತ್ತಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯಕ್ಕೆ ಮಾಹೆಯಾನ ರೂ.64000/-(ರೂಪಾಯಿ ಅರವತ್ತನಾಲ್ಕು ಸಾವಿರ ಮಾತ್ರ)ಗಳಂತೆ ಬಾಡಿಯನ್ನು ನಿಗದಿಪಡಿಸುವ ಬಗ್ಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆಯನ್ನು ನೀಡಲಾಯಿತು. |
| 10 | 2012-13ನೇ ಸಾಲಿನ 13ನೇ ಹಣಕಾಸು ಯೋಜನೆಯ ಪ್ರಥಮ ಕಂತಿನ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು | ಟಿಪ್ಪಣಿ ಸಂಖ್ಯೆ: ಜಿಪಂಹಾ/ಯೋವಿ(3)13ನೇ ಹಣಕಾಸು ಕ್ರಿ.ಯೋ 22/2012-13 ದಿನಾಂಕ: 31-10-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>2012-13ನೇ ಸಾಲಿನ 13ನೇ ಹಣಕಾಸು ಯೋಜನೆಯ ಪ್ರಥಮ ಕಂತಿನ ಅನುದಾನ ರೂ.115.78ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಬೇಕಾಗಿದ್ದು, ವಿಷಯವನ್ನು ಸಮಿತಿಯ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2012-13ನೇ ಸಾಲಿನ 13ನೇ ಹಣಕಾಸು ಯೋಜನೆಯಡಿ ಬಿಡುಗಡೆಯಾಗಿರುವ |

| | | | |
|---|---|---|---|
| | | ಟೈಲ್ಸ್, ಶೌಚಾಲಯ ದುರಸ್ಥಿ ಮತ್ತು ಕಿಟಕಿ ಬಾಗಿಲುಗಳಿಗೆ ಪರದೆಗಳ ಅಗತ್ಯವಿರುವುದರಿಂದ, ಕೊಠಡಿಯನ್ನು ನವೀಕರಣ ಮಾಡಿಸಿಕೊಡುವಂತೆ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಹಾಸನ ಇವರು ಮನವಿಯನ್ನು ಸಲ್ಲಿಸಿದ್ದು, ಈ ಸಂಬಂಧ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ವಿಭಾಗ, ಹಾಸನ ಇವರು ಕೊಠಡಿಯನ್ನು ಪರಿಶೀಲನೆ ಮಾಡಿ ನವೀಕರಿಸಲು ರೂ.1,90000/-ಗಳ ಅಂದಾಜುಪಟ್ಟಿಯನ್ನು ಸಲ್ಲಿಸಿ ಮಂಜೂರಾತಿಯನ್ನು ನೀಡಲು ಕೋರಿರುತ್ತಾರೆ. ಈ ಸಂಬಂಧ ತಗಲುವ ವೆಚ್ಚವನ್ನು 2012-13ನೇ ಸಾಲಿನ ಲೆಕ್ಕಶೀರ್ಷಿಕೆ 2515-00-101-0-29 ಜಿಲ್ಲಾ ಪಂಚಾಯಿತಿ ಕಛೇರಿಗಳ ಕಟ್ಟಡಗಳ ನಿರ್ಮಾಣ ಅಡಿಯಲ್ಲಿ ಭರಿಸಲು ಅನುಮೋದನೆ ನೀಡಬೇಕಾಗಿರುತ್ತದೆ. | ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿಯವರ ಕೊಠಡಿಯ ನವೀಕರಣದ ಅಂದಾಜು ಪಟ್ಟಿ ರೂ.190000/-(ರೂಪಾಯಿ ಒಂದು ಲಕ್ಷದ ತೊಂಬತ್ತು ಸಾವಿರ ಮಾತ್ರ)ಗಳಿಗೆ ಮಂಜೂರಾತಿ ನೀಡಲು ಮತ್ತು ಈ ಸಂಬಂಧ ತಗಲುವ ವೆಚ್ಚವನ್ನು 2012-13ನೇ ಸಾಲಿನ ಲೆಕ್ಕಶೀರ್ಷಿಕೆ 2515-00-101-0-29 ಜಿಲ್ಲಾ ಪಂಚಾಯಿತಿ ಕಛೇರಿಗಳ ಕಟ್ಟಡಗಳ ನಿರ್ಮಾಣ ಅಡಿಯಲ್ಲಿ ಭರಿಸಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |
| 7 | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಹಾಸನ ಟೌನ್ (ಸಂಖ್ಯಾಬಲ ಹೆಚ್ಚಳ) ಈ ನಿಲಯದ ಖಾಸಗಿ ಕಟ್ಟಡಕ್ಕೆ ಬಾಡಿಗೆ ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಆ (8) 1680 ZPH -09 ಬಾಡಿಗೆ 2012 ದಿನಾಂಕ: 16-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಟೌನ್‌ನಲ್ಲಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಸಂಖ್ಯಾಬಲವನ್ನು (ಸಂಖ್ಯಾಬಲ ಹೆಚ್ಚಳ) 130 ರಿಂದ 300ಕ್ಕೆ ಹೆಚ್ಚಿಸಲಾಗಿದ್ದು, ಸಂಖ್ಯಾಬಲಕ್ಕನುಗುಣವಾಗಿ ವಿದ್ಯಾರ್ಥಿನಿಲಯವನ್ನು ನಡೆಸಲು ಶ್ರೀಮತಿ ಕಮಲಮ್ಮ ಕೋಂ ಲೇ: ಸುಬ್ಬೇಗೌಡ, ಆಡುವಳ್ಳಿ ಹಿರಿಯ ಪ್ರಾಥಮಿಕ ಶಾಲೆ, ಹಿಂಬಾಗ, ಉದಯಗಿರಿ ಹಾಸನ ಇವರ ಒಡೆತನದಲ್ಲಿರುವ ಕಟ್ಟಡವನ್ನು ದಿನಾಂಕ: 19-07-2012ರಿಂದ ಬಾಡಿಗೆಯನ್ನು ಪಡೆಯಲಾಗಿದ್ದು, ಸದರಿ ಕಟ್ಟಡವು 3445 ಚ.ಅಡಿ ವಿಸ್ತೀರ್ಣವಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುತ್ತದೆ. ಈ ಕಟ್ಟಡಕ್ಕೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಹಾಸನರವರು ಮಾಹೆಯಾನ ರೂ.33000/-ಗಳನ್ನು ನಿಗದಿಪಡಿಸಿ ನಮೂನೆ -10ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಕಟ್ಟಡದ ಮಾಲೀಕರಿಗೆ 19-07-2012ರಿಂದ ಬಾಡಿಗೆಯನ್ನು ಪಾವತಿಸಬೇಕಾಗಿರುವುದರಿಂದ, ಕಟ್ಟಡಕ್ಕೆ ಬಾಡಿಗೆಯನ್ನು ನಿಗಧಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡಬೇಕೆಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿರುವಂತೆ ಶ್ರೀಮತಿ ಕಮಲಮ್ಮ ಕೋಂ ಲೇ: ಸುಬ್ಬೇಗೌಡ, ಆಡುವಳ್ಳಿ ಹಿರಿಯ ಪ್ರಾಥಮಿಕ ಶಾಲೆ, ಹಿಂಬಾಗ, ಉದಯಗಿರಿ ಹಾಸನ ಇವರ ಒಡೆತನದ ಕಟ್ಟಡದಲ್ಲಿ ನಡೆಯುತ್ತಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯಕ್ಕೆ ಮಾಹೆಯಾನ ರೂ.33000/ (ರೂಪಾಯಿ ಮೂವತ್ತಮೂರು ಸಾವಿರ ಮಾತ್ರ)ಗಳಂತೆ ಬಾಡಿಯನ್ನು ನಿಗದಿಪಡಿಸಿ ದಿನಾಂಕ: 19-07-2012ರಿಂದ ಮಾಲೀಕರಿಗೆ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆಯನ್ನು ನೀಡಲಾಯಿತು. |
| 8 | 2013ನೇ ಇಸವಿಯ ಡೈರಿ/ಕ್ಯಾಲೆಂಡರ್/ ಪ್ಯಾಕೆಟ್ | ಟಿಪ್ಪಣಿ ಸಂಖ್ಯೆ: ಜಿಪಂಕಾ/ಮ.ಶಾ/29/2012-13 ದಿನಾಂಕ: 13-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಾಸನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. |

| | | | |
|---|---|---|---|
| | | ಹಾಸನ ಇವರು 2012-13ನೇ ಸಾಲಿನಿಂದ ಸದರಿ ಕಟ್ಟಡಕ್ಕೆ ಮಾಹೆಯಾನ ರೂ.5600/-ರಂತೆ ಬಾಡಿಗೆಯನ್ನು ಪುನರ್‌ನಿಗದಿಪಡಿಸಿ ಶಿಫಾರಸ್ಸು ಮಾಡಿರುತ್ತಾರೆ. ಕಟ್ಟಡದ ಮಾಲೀಕರಿಗೆ 2012-13ನೇ ಸಾಲಿನಿಂದ ಮಾಹೆಯಾನ ರೂ.5600/-ಗಳಂತೆ ಬಾಡಿಗೆಯನ್ನು ಪಾವತಿಸುವ ಬಗ್ಗೆ ಅನುಮೋದನೆ ನೀಡಬೇಕೆಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿದರು. | ಶೇಖರ ಬಿನ್ ಸಿ.ಜೆ.ರಾಮಚಂದ್ರ, ಅತ್ತಿ ಚೌಡೇನಹಳ್ಳಿ ಹೊಳೆನರಸೀಪುರ ತಾಲ್ಲೂಕು ಇವರ ಮಾಲೀಕತ್ವದ ಕಟ್ಟಡದಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಕ್ಕೆ 2012-13ನೇ ಸಾಲಿನಿಂದ ಮಾಹೆಯಾನ ರೂ.5600/-(ರೂಪಾಯಿ ಐದು ಸಾವಿರದ ಆರು ನೂರು ಮಾತ್ರ)ಗಳಂತೆ ಬಾಡಿಯನ್ನು ನಿಗದಿಪಡಿಸಿ ಮಾಲೀಕರಿಗೆ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆಯನ್ನು ನೀಡಲಾಯಿತು. |
| 5 | ಆಲೂರು ತಾಲ್ಲೂಕು, ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾಥಿನಿಲಯದ ಹೆಚ್ಚುವರಿ ಕಟ್ಟಡಕ್ಕೆ ಮಾಹೆಯಾನ ಬಾಡಿಗೆ ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಅ (8) 1680 ZPH 7 ಬಾಡಿಗೆ 2012 ದಿನಾಂಕ: 25-09-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಆಲೂರು ತಾಲ್ಲೂಕು ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಶ್ರೀ ಹೆಚ್.ಕೆ.ರಂಗೇಗೌಡ ಬಿನ್ ಕೆಂಚೇಗೌಡ, ಇವರ ಮಾಲೀಕತ್ವದ ಕಟ್ಟಡದಲ್ಲಿ ನಡೆಸುತ್ತಿದ್ದು, 50 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಸಾಕಾಗದೇ ಇರುವುದರಿಂದ, ಸದರಿಯವರ ಒಡೆತನದಲ್ಲಿರುವ ಆಶಾ ಬಡಾವಣೆ ಎಂ.ಆರ್.ನಂ.35ರ ನಿವೇಶನ ಸಂಖ್ಯೆ: 35ರ 594 ಚದರ ಅಡಿ ವಿಸ್ತೀರ್ಣದ ಕಟ್ಟಡವನ್ನು ದಿನಾಂಕ: 01-02-2012ರಿಂದ ಹೆಚ್ಚುವರಿಯಾಗಿ ಪಡೆದುಕೊಂಡು ನಡೆಸಲಾಗುತ್ತಿದೆ. ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಹಾಸನ ಇವರು ಸಾಲಿನಿಂದ ಸದರಿ ಕಟ್ಟಡಕ್ಕೆ ಮಾಹೆಯಾನ ರೂ.3600/-ರಂತೆ ಬಾಡಿಗೆಯನ್ನು ಪುನರ್‌ನಿಗದಿಪಡಿಸಿ ಶಿಫಾರಸ್ಸು ಮಾಡಿರುತ್ತಾರೆ. ಕಟ್ಟಡದ ಮಾಲೀಕರಿಗೆ ದಿನಾಂಕ: 01-02-2012ರಿಂದ ಬಾಡಿಗೆಯನ್ನು ಪಾವತಿಸುವ ಬಗ್ಗೆ ಅನುಮೋದನೆ ನೀಡಬೇಕೆಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿರುವಂತೆ ಶ್ರೀ ಹೆಚ್.ಕೆ.ರಂಗೇಗೌಡ ಬಿನ್ ಕೆಂಚೇಗೌಡ, ಇವರ ಮಾಲೀಕತ್ವದ ಹೆಚ್ಚುವರಿ ಕಟ್ಟಡದಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ದಿ: 01-02-2012ರಿಂದ ಮಾಹೆಯಾನ ರೂ.3600/ (ರೂಪಾಯಿ ಮೂರು ಸಾವಿರದ ಆರು ನೂರು ಮಾತ್ರ)ಗಳಂತೆ ಬಾಡಿಗೆಯನ್ನು ನಿಗದಿಪಡಿಸಿ ದಿನಾಂಕ: 01-02-2012ರಿಂದ ಮಾಲೀಕರಿಗೆ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆಯನ್ನು ನೀಡಲಾಯಿತು. |
| 6 | ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಕೊಠಡಿಯನ್ನು ನವೀಕರಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಅ (8) 1680 ZPH 10 ಕಟ್ಟಡ 2012 ದಿನಾಂಕ: 25-09-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲಾ ಪಂಚಾಯಿತಿ ಮುಖ್ಯ ಕಛೇರಿಯಲ್ಲಿ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರು ಕುಳಿತುಕೊಳ್ಳುವ ಕೊಠಡಿ ತುಂಬಾ ದುಸ್ಥಿತಿಯಲ್ಲಿದ್ದು, ಬಾಗಿಲು/ಗೋಡೆಗಳಿಗೆ ಬಣ್ಣ, ನೆಲಕ್ಕೆ ವಿಟ್ರಿಫೈಡ್ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯಪಾಲಕ ಇಂಜಿನಿಯರ್, ಪಂ.ರಾ. ಇಂ.ವಿಭಾಗ, ಹಾಸನ ಇವರು ಕೋರಿರುವಂತೆ, |

| | | | |
|---|---|---|---|
| | ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ (ಹೆಚ್ಚುವರಿ ಸಂಖ್ಯಾಬಲ) ಉದಯಗಿರಿ ಬಡಾವಣೆ ಹಾಸನ ಈ ಕಟ್ಟಡಕ್ಕೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ. | ಹಾಸನ ಟೌನ್‌ನಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನು (ಹೆಚ್ಚುವರಿ ಸಂಖ್ಯಾಬಲ) ನಡೆಸಲು ಶ್ರೀಮತಿ ಬಿಳಿಯಮ್ಮ ಕೋಂ ನಂಜೇಗೌಡ, ಉದಯಗಿರಿ ಬಡಾವಣೆ, ಹಾಸನ ಇವರ ಒಡೆತನದಲ್ಲಿರುವ ಕಟ್ಟಡವನ್ನು ದಿನಾಂಕ: 01-11-2011ರಿಂದ ಬಾಡಿಗೆಗೆ ಪಡೆಯಲಾಗಿದ್ದು, ಸದರಿ ಕಟ್ಟಡವು ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುತ್ತದೆ. ಈ ಕಟ್ಟಡಕ್ಕೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಹಾಸನರವರು ಮಾಹೆಯಾನ ರೂ.11000/-ಗಳನ್ನು ನಿಗದಿಪಡಿಸಿ ನಮೂನೆ-10ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಕಟ್ಟಡದ ಮಾಲೀಕರಿಗೆ ದಿನಾಮಕ: 01-11-2011ರಂದು ಬಾಡಿಗೆಯನ್ನು ಪಾವತಿಸಬೇಕಾಗಿದ್ದು, ಸದರಿ ಕಟ್ಟಡಕ್ಕೆ ಬಾಡಿಗೆಯನ್ನು ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸನ ಇವರು ಕೋರಿರುವಂತೆ ಶ್ರೀಮತಿ ಬಿಳಿಯಮ್ಮ ಕೋಂ ನಂಜೇಗೌಡ, ಉದಯಗಿರಿ ಬಡಾವಣೆ, ಹಾಸನ ಇವರ ಒಡೆತನದಲ್ಲಿರುವ ಕಟ್ಟಡದಲ್ಲಿ ನಡೆಯುತ್ತಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಮಾಹೆಯಾನ ಬಾಡಿಗೆ ರೂ.11000/-(ರೂಪಾಯಿ ಹನ್ನೊಂದು ಸಾವಿರ ಮಾತ್ರ)ಗಳಂತೆ ನಿಗದಿಪಡಿಸಿ, ಬಾಡಿಗೆಯನ್ನು ಮಾಲೀಕರಿಗೆ ದಿನಾಂಕ: 01-11-2011ರಿಂದ ಪಾವತಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| 3 | ಅರಕಲಗೂಡು ತಾಲ್ಲೂಕು ಪಂಚಾಯಿತಿ ಕಛೇರಿ ಅವರಣದ 60*40 ಅಳತೆಯ ನಿವೇಶನವನ್ನು ಸಾಮಾಜಿಕ ಅರಣ್ಯ ವಲಯಕ್ಕೆ ಮಂಜೂರು ಮಾಡಲು ಅನುಮತಿ ಕೋರಿರುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(2)ತಾಪಂಅ 26/2012-13 ದಿನಾಂಕ: 30-08-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಅರಕಲಗೂಡು ಇವರು ದಿನಾಂಕ: 24-02-2012ರಂದು ನಡೆದ ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಆವರಣದಲ್ಲಿರುವ 60 * 40 ಅಳತೆಯ ನಿವೇಶನವನ್ನು ಸಾಮಾಜಿಕ ಅರಣ್ಯ ವಲಯ ಕಛೇರಿ ಕಟ್ಟಡ ನಿರ್ಮಿಸಲು ಸ್ಥಳ ನೀಡಲು ತೀರ್ಮಾನಿಸಲಾಗಿದ್ದು, ಈ ಸಂಬಂಧ ಜಿಲ್ಲಾ ಪಂಚಾಯಿತಿ ಅನುಮತಿ ನೀಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಅರಕಲಗೂಡು ಇವರು ಪ್ರಸ್ತಾಪಿಸಿರುವಂತೆ ತಾಲ್ಲೂಕು ಪಂಚಾಯಿತಿ ಆವರಣದಲ್ಲಿರುವ 60 * 40 ಅಳತೆಯ ನಿವೇಶನವನ್ನು ಸಾಮಾಜಿಕ ಅರಣ್ಯ ವಲಯ ಕಛೇರಿ ಕಟ್ಟಡ ನಿರ್ಮಿಸಲು ಸ್ಥಳ ನೀಡಿರುವುದಕ್ಕೆ ಸಭೆಯಲ್ಲಿ ಸರ್ವಾನುಮತ ದಿಂದ ಅನುಮತಿ ನೀಡಲಾಯಿತು. |
| 4 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾಥಿನಿಲಯ ಅತ್ತಿಚೌಡೇನ ಹಳ್ಳಿ, ಹೊಳೆನರಸೀಪುರ ತಾ: ಈ ಕಟ್ಟಡಕ್ಕೆ ಬಾಡಿಗೆ ಪುನರ್ ನಿಗದಿಪಡಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಅ (8) 1680 ZPH ಬಾಡಿಗೆ 2012 ದಿನಾಂಕ: 20-09-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹೊಳೆನರಸೀಪುರ ತಾ: ಅತ್ತಿಚೌಡೇನಹಳ್ಳಿಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು ಶ್ರೀ ಸಿ.ಆರ್.ಚಂದ್ರಶೇಖರ ಬಿನ್ ಸಿ.ಜೆ.ರಾಮಚಂದ್ರ, ಅತ್ತಿಚೌಡೇನಹಳ್ಳಿ ಹೊಳೆನರಸೀಪುರ ತಾಲ್ಲೂಕು ಇವರ ಮಾಲೀಕತ್ವದ ಕಟ್ಟಡದಲ್ಲಿ ನಡೆಸುತ್ತಿದ್ದು, ದಿನಾಂಕ: 01-09-2007ರಿಂದ ಮಾಹೆಯಾನ ರೂ.3200/-ರಂತೆ ಪಾವತಿಸಲಾಗುತ್ತಿತ್ತು. ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿರುವಂತೆ ಶ್ರೀ ಸಿ.ಆರ್.ಚಂದ್ರ |

**ದಿನಾಂಕ: 21-11-2012ರಂದು ಬೆಳಿಗ್ಗೆ 11-30ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು**
**ಅಧ್ಯಕ್ಷತೆ: ಶ್ರೀ ಬಿಳಿಚೌಡಯ್ಯ**
**ಅಧ್ಯಕ್ಷರು**
**ಸಾಮಾನ್ಯ ಸ್ಥಾಯಿ ಸಮಿತಿ**

ಹಾಜರಿ: 05

ಗೈರು ಹಾಜರಿ: 01

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಹಾಜರಿದ್ದ ಮಾನ್ಯ ಅಧ್ಯಕ್ಷರು, ಸದಸ್ಯರು, ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | | |
| 1 | ಮೆಟ್ರಿಕ್ ಪೂರ್ವ ಅಲ್ಪ ಸಂಖ್ಯಾತರ ಬಾಲಕರ ವಿದ್ಯಾರ್ಥಿ ನಿಲಯ ಕೊಣನೂರು, ಅರಕಲ ಗೂಡು ತಾಲ್ಲೂಕು ಈ ನಿಲಯದ ಬಾಡಿಗೆ ಕಟ್ಟಡಕ್ಕೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅ(8)ಕ.ಬಾ.ನಿ/61/2012-13 ದಿನಾಂಕ: 10-07-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮೆಟ್ರಿಕ್ ಪೂರ್ವ ಅಲ್ಪಸಂಖ್ಯಾತರ ಬಾಲಕರ ವಿದ್ಯಾರ್ಥಿನಿಲಯ, ಕೊಣನೂರು, ಅರಕಲಗೂಡು ತಾಲ್ಲೂಕು, ಈ ವಿದ್ಯಾರ್ಥಿನಿಲಯವನ್ನು ನಡೆಸಲು ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಮೋಮಿನ್ ಮೊಹಲ್ಲಾ ಮಸೀದಿ, ಕೊಣನೂರು ಇವರ ಒಡೆತನದಲ್ಲಿರುವ ಕಟ್ಟಡವನ್ನು ದಿನಾಂಕ: 01-10-2009ರಿಂದ ಬಾಡಿಗೆಗೆ ಪಡೆದಿದ್ದು, ಸದರಿ ಕಟ್ಟಡಕ್ಕೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಹಾಸನರವರು ಮಾಹೆಯಾನ ರೂ.17,800/-ಗಳನ್ನು ನಿಗದಿಪಡಿಸಿ ನಮೂನೆ-10ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸನ ಇವರು ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಮೋಮಿನ್ ಮೊಹಲ್ಲಾ ಮಸೀದಿ, ಕೊಣನೂರು ಇವರ ಒಡೆತನದಲ್ಲಿರುವ ಕಟ್ಟಡಕ್ಕೆ ದಿನಾಂಕ: 01-10-2009ರಿಂದ ಬಾಡಿಗೆಯನ್ನು ನಿಗದಿಪಡಿಸಿ ಪಾವತಿಸುವ ಬಗ್ಗೆ ಅನುಮೋದನೆಯನ್ನು ನೀಡುವಂತೆ ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸನ ಇವರು ಕೋರಿರುವಂತೆ ಅರಕಲಗೂಡು ತಾಲ್ಲೂಕು, ಕೊಣನೂರು ಗ್ರಾಮದಲ್ಲಿ ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಮೋಮಿನ್ ಮೊಹಲ್ಲಾ ಮಸೀದಿ, ಕೊಣನೂರು ಇವರ ಒಡೆತನದಲ್ಲಿರುವ ಕಟ್ಟಡಕ್ಕೆ ಮಾಹೆಯಾನ ರೂ.15000/- (ರೂಪಾಯಿ ಹದಿನೈದು ಸಾವಿರ ಮಾತ್ರ)ಗಳಂತೆ ಬಾಡಿಗೆ ನಿಗದಿಪಡಿಸಿ ದಿನಾಂಕ: 01-10-2009ರಿಂದ ಪಾವತಿಸಲು ಅನುಮೋದನೆ ಯನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |

3. ಶ್ರೀಮತಿ ಜಿ.ಟಿ. ಇಂದಿರಾಧರ್ಮಪ್ಪ, ಸದಸ್ಯರು, ಸಾಮಾನ್ಯ ನ್ಯಾಯ ಸ್ಥಾಯಿ ಸಮಿತಿ
4. ಶ್ರೀ ದೇವೇಗೌಡ ಉರುಫ್ ಪಾಪಣ್ಣಿ, ಸದಸ್ಯರು, ಸಾಮಾನ್ಯ ಸ್ಥಾಯಿ ಸಮಿತಿ
5. ಶ್ರೀ ಬಿ.ಎನ್.ರಾಮಚಂದ್ರ (ಭೈರಮುಡಿ ರಾಮಚಂದ್ರು), ಸದಸ್ಯರು, ಸಾಮಾನ್ಯ ಸ್ಥಾಯಿ ಸಮಿತಿ
6. ಶ್ರೀಮತಿ ಹೆಚ್.ಎನ್.ಗೌರಮ್ಮ, ಸದಸ್ಯರು, ಸಾಮಾನ್ಯ ಸ್ಥಾಯಿ ಸಮಿತಿ
7. ಮಾನ್ಯ ಅಧ್ಯಕ್ಷರು/ಮಾನ್ಯ ಉಪಾಧ್ಯಕ್ಷರು ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತ ಶಾಖೆಗೆ ಮಾಹಿತಿಗಾಗಿ
8. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
9. ಮಾನ್ಯ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತ ಶಾಖೆಗೆ
10. ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
11. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ/ ಚನ್ನರಾಯಪಟ್ಟಣ
15. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
16. ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
17. ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆ, ಹಾಸನ.
18. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿ.ಪಂಹಾ/ಪ.ಶಾ/ 34/2012-13

ದಿನಾಂಕ: 15-11-2012

## ಮುಂದೂಡಿದ ಸಭಾಹ್ವಾನ ಪತ್ರ

ಶ್ರೀ ಬಿಳಿಚೌಡಯ್ಯ, ಅಧ್ಯಕ್ಷರು, ಸಾಮಾನ್ಯ ಸ್ಥಾಯಿ ಸಮಿತಿ, ಇವರ ಅಧ್ಯಕ್ಷತೆಯಲ್ಲಿ **ದಿನಾಂಕ: 17-11-2012ರಂದು ಶನಿವಾರ ಬೆಳಿಗ್ಗೆ: 11-00ಗಂಟೆಗೆ** ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ಕರೆಯಲಾಗಿದ್ದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯನ್ನು ಕಾರಣಾಂತರಗಳಿಂದ ದಿನಾಂಕ: 21-11-2012ರ ಮಧ್ಯಾಹ್ನ: 2-30ಗಂಟೆಗೆ ಮುಂದೂಡಲಾಗಿದೆ. ಆದ್ದರಿಂದ ಸದರಿ ಸಭೆಗೆ ಸದಸ್ಯರುಗಳು ಸಕಾಲಕ್ಕೆ ಹಾಜರಾಗಬೇಕೆಂದು ಕೋರಿದೆ.

(ಹೆಚ್.ಸಿ.ಪುಟ್ಟಸ್ವಾಮಿ)
ಸದಸ್ಯ ಕಾರ್ಯದರ್ಶಿ ಹಾಗೂ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಮೆಟ್ರಿಕ್ ಪೂರ್ವ ಅಲ್ಪಸಂಖ್ಯಾತರ ಬಾಲಕರ ವಿದ್ಯಾರ್ಥಿನಿಲಯ, ಕೊಣನೂರು, ಅರಕಲಗೂಡು ತಾಲ್ಲೂಕು ಈ ನಿಲಯದ ಬಾಡಿಗೆ ಕಟ್ಟಡಕ್ಕೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.
2. ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ (ಹೆಚ್ಚುವರಿ ಸಂಖ್ಯಾಬಲ) ಉದಯಗಿರಿ ಬಡಾವಣೆ, ಹಾಸನ ಈ ಕಟ್ಟಡಕ್ಕೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.
3. ಅರಕಲಗೂಡು ತಾಲ್ಲೂಕು ಪಂಚಾಯಿತಿ ಕಛೇರಿ ಆವರಣದ 60 *40 ಅಳತೆಯ ನಿವೇಶನವನ್ನು ಸಾಮಾಜಿಕ ಅರಣ್ಯ ವಲಯಕ್ಕೆ ಮಂಜೂರು ಮಾಡಲು ಅನುಮತಿ ಕೋರಿರುವ ಬಗ್ಗೆ.
4. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಅತ್ತೀಚೌಡೇನಹಳ್ಳಿ, ಹೊಳೆನರಸೀಪುರ ತಾಲ್ಲೂಕು, ಈ ಕಟ್ಟಡಕ್ಕೆ ಬಾಡಿಗೆ ಪುನರ್ ನಿಗದಿಪಡಿಸುವ ಬಗ್ಗೆ.
5. ಆಲೂರು ತಾಲ್ಲೂಕು ಹಿಂದುಳಿದ ವರ್ಗಗಳ ಮೆಟ್ರಿಕ್ ಪೂವ್ ಬಾಲಕಿಯರ ವಿದ್ಯಾರ್ಥಿನಿಲಯದ ಹೆಚ್ಚುವರಿ ಕಟ್ಟಡಕ್ಕೆ ಮಾಹೆಯಾನ ಬಾಡಿಗೆ ನಿಗದಿಪಡಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.
6. ಮುಖ್ಯ ಲೆಕ್ಕಾಧಿಕಾರಿಗಳು, ಜಿ.ಪಂ. ಹಾಸನ ಇವರ ಕೊಠಡಿಯನ್ನು ನವೀಕರಿಸುವ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

ಪ್ರತಿಯನ್ನು:

1. ಶ್ರೀ ಬಿಳಿಚೌಡಯ್ಯ, ಅಧ್ಯಕ್ಷರು, ಸಾಮಾನ್ಯ ಸ್ಥಾಯಿ ಸಮಿತಿ
2. ಶ್ರೀಮತಿ ಕುಸುಮ ಬಾಲಕೃಷ್ಣ, ಸದಸ್ಯರು, ಸಾಮಾನ್ಯ ಸ್ಥಾಯಿ ಸಮಿತಿ